ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಶಿಕ್ಷಕರಿಗೆ ವಿಶೇಷ ಭತ್ಯೆ ಹಿಂಪಡೆಯುವ ಆದೇಶ ರದ್ದತಿ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) -

50 (83) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ದಿನಾಂಕ: 1-08-2008 ನಂತರ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ನೇಮಕಾತಿ/ ಬಡ್ತಿ ಹೊಂದಿದ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಭತ್ಯೆಯನ್ನು ಹಿಂಪಡೆಯಲು ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ರೀತಿ ಹಿಂಪಡೆಯಲು ಕಾರಣಗಳೇನು; (ವಿವರ ನೀಡುವುದು)

(ಈ) ಹಿಂಪಡೆದಿರುವ ಆದೇಶವನ್ನು ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಹಿಂಪಡೆಯಲು ಕ್ರಮ ಕೈಗೊಳ್ಳಲಾಗುವುದು?